ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 803

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಎಂ.ಎ ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 15.12.2020

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
ಅ	ರಾಜ್ಯದಲ್ಲಿ ಲಾಕ್ ಡೌನ್ ಸಮಯದಲ್ಲಿ ಬಡವರಿಗೆ ಸರ್ಕಾರದ ವತಿಯಿಂದ ಒದಗಿಸಲಾದ ಪಡಿತರವು ಸೂಕ್ತ ಫಲಾನುಭವಿಗಳಿಗೆ ಸೂಕ್ತ ಸಮಯಕ್ಕೆ ಸಿಗದೆ ದಲ್ಲಾಳಿಗಳ ಪಾಲಾಗಿ ಬಡವರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಇಲ್ಲ. ಕೋವಿಡ್-19 ಲಾಕ್ ಡೌನ್ ಸಂಧರ್ಭದಲ್ಲಿ ಫಲಾನುಭವಿಗಳಿಗೆ ಯಾವುದೇ ರೀತಿಯಲ್ಲಿ ತೊಂದರೆಯಾಗದಂತೆ ಪಡಿತರ ವಿತರಣೆಯನ್ನು ನಿರ್ವಹಿಸಲಾಗಿದೆ. ಬಯೋಮೆಟ್ರಿಕ್ ವ್ಯವಸ್ಥೆಗೆ ಪರ್ಯಾಯವಾಗಿ ಆಧಾರ್ ಓಟಿಪಿ ಮತ್ತು ಮೊಬೈಲ್ ಓಟಿಪಿ ವ್ಯವಸ್ಥೆಗಳನ್ನೂ ಕೂಡ ಜಾರಿಗೊಳಿಸಿ ಪಡಿತರ ವಿತರಿಸಲಾಗಿದೆ. ಇದರೊಂದಿಗೆ ಕೇಂದ್ರ ಸರ್ಕಾರದ ಪಿಎಂಜಿಕೆವೈ ಯೋಜನೆಯಡಿ ಹಂಚಿಕೆ ಮಾಡಲಾದ ಹೆಚ್ಚುವರಿ ಆಹಾರ ಧಾನ್ಯಗಳನ್ನು ಸಹ ಫಲಾನುಭವಿಗಳಿಗೆ ವಿತರಿಸಲಾಗಿದೆ.
ಆ	ಹಾಗಿದ್ದಲ್ಲಿ, ಸರ್ಕಾರ ಪಡಿತರ ವ್ಯವಸ್ಥೆಯ ಪಾರದರ್ಶಕತೆ ಕಾಪಾಡಲು ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)	ಪಡಿತರ ಹಂಚಿಕೆಗಾಗಿ ಆಧಾರ್ ಓಟಿಪಿ ಮತ್ತು ಮೊಬೈಲ್ ಓಟಿಪಿ ವ್ಯವಸ್ಥೆಗಳನ್ನು ಕಡ್ಡಾಯವಾಗಿ ಅನುಸರಿಸಿದ್ದು ಪಾರದರ್ಶಕವಾಗಿ ವಿವರಗಳನ್ನು ಆನ್‌ಲೈನ್‌ನಲ್ಲಿ ರಾಜ್ಯದ ಮತ್ತು ಕೇಂದ್ರದ "ಅನ್ನವಿತರಣ್" ದತ್ತಾಂಶಗಳಲ್ಲಿ ದಾಖಲಿಸಿ ನಿರ್ವಹಿಸಲಾಗಿದೆ.
ಇ	ಅತ್ಯಂತ ಕಡು ಬಡವರಿಗೆ ಅಂತ್ಯೋದಯ ಯೋಜನೆಯಡಿ ನೀಡುವ ಪಡಿತರವು ಅವರಿಗೆ ಸಾಲದೆ ಅವರ ದೈನಂದಿನ ಜೀವನ ನಿರ್ವಹಣೆಗೆ ಕಷ್ಟಸಾಧ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸದರಿಯವರಿಗೆ ಹೆಚ್ಚಿನ ಸೌಲಭ್ಯ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)	ಇಲ್ಲ. ಅಂತ್ಯೋದಯ ಅನ್ನ ಯೋಜನೆ ಪಡಿತರ ಚೀಟಿದಾರರಿಗೆ ಪ್ರತಿ ಮಾಹೆ ಕೇಂದ್ರ ಸರ್ಕಾರದ ನಿಗದಿತ ಹಂಚಿಕೆ ಪ್ರಮಾಣದಂತೆಯೇ ಪ್ರತಿ ಪಡಿತರ ಚೀಟಿಗೆ ತಲಾ 35 ಕೆ.ಜಿ. ಆಹಾರಧಾನ್ಯವನ್ನು ಉಚಿತವಾಗಿ ವಿತರಿಸಲಾಗುತ್ತಿದೆ. ಇದರಿಂದಾಗಿ ದೈನಂದಿನ ಜೀವನ ನಿರ್ವಹಣೆಗೆ ಅನುಕೂಲವಾಗಿದೆ.
ಈ	ಪಡಿತರ ವ್ಯವಸ್ಥೆಯಲ್ಲಿ ಅಂತ್ಯೋದಯ, ಬಿಪಿಎಲ್, ಎಪಿಎಲ್ ಪಡಿತರ ಚೀಟಿಯನ್ನು ಸಾರ್ವಜನಿಕರ ಆರ್ಥಿಕ ಪರಿಸ್ಥಿತಿ ಆಧರಿಸಿ ನೀಡಿರುವಂತೆ ರಾಜ್ಯದಲ್ಲಿರುವ ವಿಶೇಷ ಚೇತನರಿಗೆ, ವಿಧವೆಯರಿಗೆ ಹಾಗೂ ಇತರರಿಗೆ ವಿಶೇಷ ಪಡಿತರ ಚೀಟಿ ವಿತರಿಸಿ ಸೌಲಭ್ಯ ನೀಡುವ ಯೋಜನೆಯ ಕುರಿತು ಸರ್ಕಾರದ ನಿಲುವೇನು? (ವಿವರ ನೀಡುವುದು)	ಪಡಿತರ ವ್ಯವಸ್ಥೆಯಲ್ಲಿ ಅರ್ಹ ಫಲಾನುಭವಿಗಳನ್ನು ರಾಜ್ಯ ಸರ್ಕಾರದಿಂದ ನಿಗದಿಪಡಿಸಲಾಗಿರುವ ಮಾನದಂಡಗಳನ್ನು ಅನುಸರಿಸಿ ಆಯ್ಕೆ ಮಾಡಲಾಗಿದೆ. ಇದರಲ್ಲಿ ಕುಟುಂಬದ ಆರ್ಥಿಕ ಪರಿಸ್ಥಿತಿಯನ್ನು ಪರಿಗಣಿಸಲಾಗಿದೆ. ವಿಶೇಷ ಚೇತನರಿಗೆ, ವಿಧವೆಯರು, ಏಡ್ಸ್ ರೋಗಿಗಳು, ಕುಷ್ಠ ರೋಗಿಗಳು ಇತ್ಯಾದಿ ಫಲಾನುಭವಿಗಳಿಗೆ ಅರ್ಹತೆ ಮೇರೆಗೆ ಆಯ್ಕೆ ಮಾಡಲು ಅವಕಾಶ ಕಲ್ಪಿಸಲಾಗಿದೆ.

ಆನಾಸ 340 ಡಿಆರ್ ಎ 2020 (ಇ-ಆಫೀಸ್)

(ಕೆ.ಗೋಪಾಲಯ್ಯ)

ಆಹಾರ, ನಾಗರಿಕ ಸರಬರಾಜು ಮತ್ತು

ಗ್ರಾಹಕರ ವ್ಯವಹಾರಗಳ ಹಾಗೂ

ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.